**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/31/ಸುತ್ತೋಲೆ/2016-17/ರೂಸಾ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-01. ದಿ: 13.07.2018
ದೂ.ಸಂ.080-22343905

# "ಸುತ್ತೋಲೆ"

**ವಿಷಯ:** ರೂಸಾ ಯೋಜನೆಗೊಳಪಡುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು RUSA Fund Tracker ನಲ್ಲಿ ಮಾಹಿತಿಗಳನ್ನು ಅಪ್‌ಲೋಡ್ ಮಾಡುವ ಬಗ್ಗೆ.

**ಉಲ್ಲೇಖ:** 1. ದಿನಾಂಕ: 11-07-2018 ರಂದು MHRD ಯೊಂದಿಗೆ ನಡೆದ ವಿಡಿಯೋ ಕಾನ್ಫರೆನ್ಸ್ ಸಭೆ.
2.ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಈ-ಮೇಲ್ ಸಂದೇಶ ದಿ:13-07-2018.

******

ರಾಷ್ಟ್ರೀಯ ಉಚ್ಚತರಾ ಶಿಕ್ಷಾ ಅಭಿಯಾನ್ (ರೂಸಾ) ಯೋಜನೆಯಡಿಯಲ್ಲಿ ಆಯ್ಕೆಯಾಗಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಈಗಾಗಲೇ ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ರೂಸಾ ಅನುದಾನವನ್ನು ಬಿಡುಗಡೆ ಮಾಡಲಾಗಿದೆ. ಈ ಯೋಜನೆಯ ಎಲ್ಲಾ ಮಾಹಿತಿಗಳನ್ನು PFMS, ರೂಸಾ ಭುವನ್ ಆಪ್ ಹಾಗೂ RUSA Fund Tracker ನಲ್ಲಿ **ದಿ:16-07-2018 ರ ಸಂಜೆ 5.00 ರೊಳಗೆ** ಅಪ್‌ಲೋಡ್ ಮಾಡಲು ಉಲ್ಲೇಖಿತ ಪತ್ರದಲ್ಲಿ ತಿಳಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ರೂಸಾ ಯೋಜನೆಯ ಸಮಗ್ರ ಮಾಹಿತಿಗಳನ್ನು ಸದರಿ ದಿನಾಂಕದೊಳಗೆ ತಪ್ಪದೇ ಅಪ್‌ಲೋಡ್ ಮಾಡಲು ಆದೇಶಿಸಲಾಗಿರುತ್ತದೆ.

ಮುಂದುವರೆದು ರೂಸಾ ಯೋಜನೆಯಡಿಯಲ್ಲಿ ಇತ್ತೀಚಿಗೆ ಬಿಡುಗಡೆಯಾದ ಅನುದಾನವನ್ನು ಬಳಸಿಕೊಂಡಿರುವ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರದ MHRD ಗೆ ಸಲ್ಲಿಸಬೇಕಾಗಿರುವುದರಿಂದ ಇದನ್ನೂ ಸಹ ಶೀಘ್ರವಾಗಿ ಕಳುಹಿಸಿಕೊಡುವಂತೆ ಸಂಬಂಧಪಟ್ಟ ಎಲ್ಲಾ ರೂಸಾ ಯೋಜನೆಗೊಳಪಡುವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ:-
ರೂಸಾ ಯೋಜನೆಗೊಳಪಟ್ಟಿರುವ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಶೀಘ್ರವಾಗಿ ಕ್ರಮಕೈಗೊಳ್ಳಲು.

ಪ್ರತಿಯನ್ನು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ, (ಉನ್ನತ ಶಿಕ್ಷಣ)ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಜಂಟಿ ನಿರ್ದೇಶಕರುಗಳು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು,ಮೈಸೂರು,ಮಂಗಳೂರು,
3. ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ – ಮಾಹಿತಿಗಾಗಿ.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತ್, ನಂ.30, ಪ್ರಸನ್ನಕುಮಾರ್ ಬ್ಲಾಕ್, ಸೆಂಟ್ರಲ್ ಯೂನಿವರ್ಸಿಟಿ ಕ್ಯಾಂಪಸ್, ವೈ. ರಾಮಚಂದ್ರ ರಸ್ತೆ, ಬೆಂಗಳೂರು-560009.
5. ಡಾ|| ಭಾಗ್ಯವಾನ್ ಮುದಿಗೌಡ್ರ, ರಾಜ್ಯ ರೂಸಾ ನೋಡಲ್ ಅಧಿಕಾರಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ಸುತ್ತೋಲೆಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಕಛೇರಿ ಪ್ರತಿ.